ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು - ೫೨

ಪಟ್ಟಿ - ೦೪

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೈದನೇ ಅಧಿವೇಶನ

**ಗುರುವಾರ, ದಿನಾಂಕ : ೨೬ನೇ ಜೂನ್, ೨೦೧೪**

## ಸಮೂಹ - IV

೧. ಮುಖ್ಯಮಂತ್ರಿಗಳು

೨. ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

## ಹೆಚ್. ಆರ್. ಎಂ. ಎಸ್. ನಿಂದ ಅನಾನುಕೂಲ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೮೨ (೧೭೭) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಎಚ್.ಆರ್.ಎಂ.ಎಸ್. ಕಾರ್ಯಕ್ರಮ ಎಂದಿನಿಂದ ಜಾರಿಗೆ ಬಂದಿದೆ;

(ಆ) ಇದರಿಂದ ಅನುಕೂಲಕ್ಕಿಂತ ಅನಾನುಕೂಲಗಳೇ ಜಾಸ್ತಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ;

(ಇ) ಈ ಕಾರ್ಯಕ್ರಮದಿಂದ ಆಗುತ್ತಿರುವ ಅನುಕೂಲ/ ಅನಾನುಕೂಲಗಳೇನು;

(ಈ) ಇದನ್ನು ಕೈಬಿಡಲು ಸರ್ಕಾರ ಯೋಚನೆ ಮಾಡಿರುವುದೇ;

(ಉ) ಇಲ್ಲದಿದ್ದಲ್ಲಿ ಇದನ್ನು ಸರಳೀಕರಣ ಮಾಡಲು ಯೋಚಿಸಿರುವುದೇ ?

## ಕುಡಿಯುವ ನೀರಿನ ಕೊರತೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೮೩ (೦೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಜಿಲ್ಲೆ, ಕೊರಟಗೆರೆ ಪಟ್ಟಣಕ್ಕೆ ಹೇಮಾವತಿ ನದಿ ನೀರನ್ನು ಕಳೆದ ಒಂದು ವರ್ಷದಿಂದ ಒದಗಿಸುತ್ತಿದ್ದಾಗ್ಯೂ ಪಟ್ಟಣದ

ವಾಸಿಗಳಿಗೆ ಕುಡಿಯುವ ನೀರನ್ನು ಒಂದು ವಾರಕೊಮ್ಮೆಯಾದರೂ ಸರಬರಾಜು ಮಾಡದೇ ಕುಡಿಯುವ ನೀರಿನ ತೀವ್ರ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎರಡು ದಿನಕ್ಕೊಮ್ಮೆಯಾದರೂ ನೀರನ್ನು ಕೊಳಾಯಿ ಮೂಲಕ ಸರಬರಾಜು ಮಾಡಲು ಕೂಡಲೇ ಕ್ರಮ ಕೈಗೊಳ್ಳಲಾಗುವುದೇ ; ಕೊಳಾಯಿಗಳ ಮೂಲಕ ನೀರು ಬಿಡದಿರಲು ಇರುವ ತೊಂದರೆಯೇನು ?

## ಹಂದಿಗಳ ಹಾವಳಿಯಿಂದ ಪರಿಸರ ಮಾಲಿನ್ಯ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೮೪ (೦೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ತುಮಕೂರು ಜಿಲ್ಲೆ, ಕೊರಟಗೆರೆ ಪಟ್ಟಣದಲ್ಲಿ ಹಂದಿಗಳ ಹಾವಳಿ ಹೆಚ್ಚಾಗಿದ್ದು, ರಸ್ತೆ ಹಾಗೂ ಚರಂಡಿಗಳಲ್ಲಿ ಪ್ರತಿನಿತ್ಯ ಅಡ್ಡಾಡುತ್ತಿದ್ದು, ವಾತಾವರಣವು ತುಂಬಾ ಮಲೀನಗೊಂಡು ದುರ್ವಾಸನೆಯಿಂದ ಕೂಡಿದ್ದು, ಇದರಿಂದಾಗಿ ಜನರಿಗೆ ಅನೇಕ ರೀತಿಯ ರೋಗ-ರುಜಿನಗಳು ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಹಂದಿಗಳ ಹಾವಳಿಯನ್ನು ತಪ್ಪಿಸಲು ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳುವುದು ?

## ಬದಲಿ ನಿವೇಶನ ನೀಡುವಲ್ಲಿ ಅವ್ಯವಹಾರ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ ಹೊಂದಿದವರು) :-**

೮೫ (೧೭೬) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಬದಲಿ ನಿವೇಶನ ನೀಡುವುದು ಎಂದಿನಿಂದ ಜಾರಿಗೆ ಬಂದಿದೆ;

(ಆ) ಹಾಗಿದ್ದಲ್ಲಿ, ೨೦೧೨ರಲ್ಲಿ ಕೆಲವು ಬಡಾವಣೆಗಳಲ್ಲಿ ಬದಲಿ ನಿವೇಶನ ನೀಡಬಾರದೆಂದು ಆದೇಶ ಮಾಡಲಾಗಿತ್ತೆ; (ಆದೇಶದ ವಿವರ ನೀಡುವುದು)

(ಇ) ಆದೇಶ ಉಲ್ಲಂಘನೆ ಮಾಡಿ ಎಷ್ಟು ನಿವೇಶನಗಳನ್ನು ನೀಡಲಾಗಿದೆ; (ಪೂರ್ಣ ವಿವರ ನೀಡುವುದು)

(ಈ) ಕಳೆದ ೨ ವರ್ಷದಲ್ಲಿ ಮಂಜೂರಾತಿ ಸಮಿತಿಯ ಆದೇಶ ಇಲ್ಲದೆ ನೀಡಿರುವ ನಿವೇಶನಗಳೆಷ್ಟು; (ವಿವರ ನೀಡುವುದು) ಬದಲಿ ನಿವೇಶನ ನೀಡಲು ಆದೇಶ ಆಗಿದ್ದರೂ ನೀಡದೇ ಇರಲು ಕಾರಣವೇನು; (ವಿವರ ನೀಡುವುದು)

(ಉ) ಬದಲಿ ನಿವೇಶನದಲ್ಲಿ ಆಗಿರುವ ಅವ್ಯವಹಾರದಲ್ಲಿ ಭಾಗಿಯಾದವರ ಮೇಲೆ ಸರ್ಕಾರ ಕ್ರಮ ಕೈಗೊಳ್ಳುವುದೆ?

## ನಗರಗಳಲ್ಲಿ ನಾಯಿಗಳ ದಾಳಿ ತಡೆಗಟ್ಟಲು ಕೈಗೊಂಡಿರುವ ಕ್ರಮಗಳು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೮೬ (೧೩೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಎರಡು ವರ್ಷಗಳಿಂದ ಬೀದಿ ನಾಯಿಗಳ ದಾಳಿಗೊಳಗಾದವರ ಸಂಖ್ಯೆ ಎಷ್ಟು ;

(ಆ) ಬೀದಿ ನಾಯಿಗಳ ದಾಳಿಗೊಳಗಾದವರಿಗೆ ಸರ್ಕಾರ ನೀಡಿರುವ ಪರಿಹಾರವೆಷ್ಟು ;

(ಇ) ಹಾಸನ ನಗರದಲ್ಲಿ ಬೀದಿ ನಾಯಿಗಳ ದಾಳಿ ಪ್ರಕರಣಗಳೆಷ್ಟು ; ನೀಡಿರುವ ಪರಿಹಾರವೆಷ್ಟು ;

(ಈ) ಬೀದಿ ನಾಯಿಗಳ ನಿಯಂತ್ರಣಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮರಳು ಕಳ್ಳಸಾಗಣೆ ದಂಧೆ ನಿಯಂತ್ರಣ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೮೭ (೧೩೭) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ಜಿಲ್ಲೆಯಲ್ಲಿ ಕಳೆದ ಒಂದು ವರ್ಷದಿಂದ ಪತ್ತೆಯಾಗಿರುವ ಮರಳು ಕಳ್ಳಸಾಗಣೆ ಪ್ರಕರಣಗಳೆಷ್ಟು ;

(ಆ) ಜಿಲ್ಲೆಯ ಸಕಲೇಶಪುರ, ಆಲೂರು, ಬೇಲೂರು, ಅರಕಲಗೂಡು ಮತ್ತು ಹೊಳೆನರಸೀಪುರ ತಾಲ್ಲೂಕುಗಳಲ್ಲಿ ನಿರಾತಂಕವಾಗಿ ನಡೆಯುತ್ತಿರುವ ಮರಳು ದಂಧೆಗೆ ಕಡಿವಾಣ ಹಾಕಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಈಗಾಗಲೇ ಹೇಮಾವತಿ ನದಿಯಲ್ಲಿನ ಶೇ. ೯೦ರಷ್ಟು ಮರಳು ಸಂಪತ್ತು ಖಾಲಿಯಾಗಿದ್ದು, ಮತ್ತೆ ಕ್ರೋಢೀಕರಣವಾಗಲು ಅಂದಾಜು ೧೦೦ ವರ್ಷಗಳು ಬೇಕು, ಇದರಿಂದ ನದಿಯಲ್ಲಿ ನೀರು ಶೇಖರಣೆ ಕಡಿಮೆಯಾಗಿ ಕುಡಿಯುವ ನೀರಿನ ಸಮಸ್ಯೆ ತಲೆದೋರಿದ್ದು, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಮರಳು ನೀತಿಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಕಾಯ್ದೆಯಲ್ಲಿ ಅಗತ್ಯ ಮಾರ್ಪಾಡು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರೈಲ್ವೇ ಮಾರ್ಗದಲ್ಲಿ ಮೇಲ್ಸೇತುವೆ ನಿರ್ಮಾಣ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೮೮ (೧೬೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಹಾಸನ ನೂತನ ಬಸ್ ನಿಲ್ದಾಣದ ಹತ್ತಿರ ಹಾದು ಹೋಗಿರುವ ರೈಲ್ವೇ ಹಳಿಗೆ ಮೇಲ್ಸೇತುವೆ ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಹಾಸನ ನಗರದ ಎನ್.ಆರ್. ಸರ್ಕಲ್‌ನಿಂದ ನೂತನ ಬಸ್ ನಿಲ್ದಾಣದವರೆಗೆ ಅಧಿಕ ವಾಹನ ದಟ್ಟಣೆಯಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ರಸ್ತೆಯನ್ನು ಅಗಲೀಕರಣ ಮಾಡಲು ಕೈಗೊಂಡಿರುವ ಕ್ರಮಗಳೇನು ;

(ಇ) ನಗರದ ರೈಲ್ವೇ ಸ್ಟೇಷನ್‌ನಿಂದ ಡೇರಿ ವೃತ್ತದವರೆಗೆ ಬೀದಿ ದೀಪಗಳಿಲ್ಲದೇ ಸಾರ್ವಜನಿಕರಿಗೆ ತೊಂದರೆಯಾಗಿದ್ದು ಬೀದಿ ದೀಪ ಅಳವಡಿಸಲು ಕೈಗೊಂಡಿರುವ ಕ್ರಮಗಳೇನು ?

## ಬೆಂಗಳೂರು ನಗರದಲ್ಲಿ ವಾಹನ ದಟ್ಟಣೆ

**ಶ್ರೀಮತಿ ತಾರಾಅನುರಾಧ (ನಾಮನಿರ್ದೇಶನ ಹೊಂದಿದವರು):–**

೮೯ (೧೩೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ಬೆಂಗಳೂರಿನ ಕೆಲ ಟ್ರಾಫಿಕ್ ಸಿಗ್ನಲ್‌ಗಳಲ್ಲಿ (ಪೀಕ್ ಹವರ್ಸ್ ಗಳಲ್ಲಿ) ವಾಹನ ದಟ್ಟಣೆ, ನಿಲುಗಡೆ ದಿನೇ ದಿನೇ ಜಾಸ್ತಿಯಾಗಿ, ವಾಹನ ಸವಾರರು, ಸಾರ್ವಜನಿಕರು ಸಮಯ ವ್ಯರ್ಥದೊಂದಿಗೆ, ತೀವ್ರ ತೊಂದರೆಗಳನ್ನು ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

## ಪೊಲೀಸ್ ಠಾಣೆಗಳಲ್ಲಿ ಅನಾಥವಾಗಿ ನಿಂತಿರುವ ವಾಹನಗಳು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೯೦ (೧೩೬೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:–

(ಅ) ರಾಜ್ಯದ ವಿವಿಧ ಜಿಲ್ಲೆಗಳ ಪೊಲೀಸ್ ಠಾಣೆಗಳಲ್ಲಿ ನಾನಾ ಪ್ರಕರಣಗಳಲ್ಲಿ ಭಾಗಿಯಾದ ವರ್ಷಾನುಗಟ್ಟಲೆ ವಾರಸುದಾರರು ಇಲ್ಲದೇ ಅನಾಥವಾಗಿ ನಿಂತಿರುವ ವಾಹನಗಳೆಷ್ಟು ;

(ಆ) ಇವುಗಳನ್ನು ಸಂಬಂಧಪಟ್ಟ ವಾರಸುದಾರರಿಗೆ ನೀಡಲು ಪೊಲೀಸ್ ಇಲಾಖೆ ಕೈಗೊಂಡ ಕ್ರಮಗಳೇನು ;

(ಇ) ಒಂದು ವೇಳೆ ಮಾಲೀಕರು ಸಿಗದೇ ಇದ್ದಲ್ಲಿ ಅಂತಹ ವಾಹನವನ್ನು ಹರಾಜು ಹಾಕಲು ಸರ್ಕಾರ ಕೈಗೊಂಡ ಕ್ರಮಗಳೇನು (ಪೂರ್ಣ ಮಾಹಿತಿ ನೀಡುವುದು) ?

## ಅರ್ಚಕರಿಗೆ ತಸ್ತಿಕ್ ಹಣ ಸಂದಾಯ.

**ಶ್ರೀ ಬಿ.ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):-**

**೯೧ (೧೩೫) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-**

(ಅ) ರಾಜ್ಯದ ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನದ ಅರ್ಚಕರುಗಳಿಗೆ ತಸ್ತಿಕ್ ಹಣವನ್ನು ಯಾವ ರೀತಿಯಲ್ಲಿ ನೀಡಲಾಗುವುದು (ಬ್ಯಾಂಕ್ ಮುಖಾಂತರ/ ಚೆಕ್ ಮುಖಾಂತರ/ ಅಥವಾ ನೇರವಾಗಿ);

(ಆ) ಕೆಲವು ಜಿಲ್ಲೆಯ ಅರ್ಚಕರಿಗೆ ಬ್ಯಾಂಕ್ ಮುಖಾಂತರ ನೀಡುವ ಬದಲಾಗಿ, ನೇರವಾಗಿ ಅರ್ಚಕರಿಗೆ ನೀಡಿ ಕಮೀಷನ್ ವಸೂಲಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ, ಬ್ಯಾಂಕ್ ಮುಖಾಂತರ ಅರ್ಚಕರಿಗೆ ತಸ್ತಿಕ್ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು?

## ಪೊಲೀಸ್ ಸಿಬ್ಬಂದಿಗೆ ವಸತಿ ಗೃಹ ನಿರ್ಮಾಣ.

**ಶ್ರೀ ಅಶ್ವಥ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು):-**

**೯೨ (೧೪೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-**

(ಅ) ಪೊಲೀಸ್ ಇಲಾಖೆ ಆರಕ್ಷಕರು, ಅಧಿಕಾರಿಗಳು ಹಾಗೂ ಸಿಬ್ಬಂದಿವರ್ಗದವರಿಗೆ ಇಲಾಖೆ ವತಿಯಿಂದ ವಸತಿ ಗೃಹ ನಿರ್ಮಾಣ ಯೋಜನೆ ಬಗ್ಗೆ ಸರ್ಕಾರ ಕ್ರಮ ತೆಗೆದುಕೊಂಡಿದೆಯೇ; ತೆಗೆದುಕೊಂಡಿದ್ದಲ್ಲಿ, ನಿವೇಶನವನ್ನು

ಎಲ್ಲಿ ನಿಗದಿ ಮಾಡಿದೆ, ಎಷ್ಟು ಎಕರೆ ಪ್ರದೇಶದಲ್ಲಿ ಎಷ್ಟು ಗೃಹಗಳನ್ನು ನಿರ್ಮಾಣ ಮಾಡಲಾಗಿದೆ, ಇದಕ್ಕಾಗಿ ಎಷ್ಟು ಹಣ ವ್ಯಯ ಮಾಡಲಾಗಿದೆ, ಹಾಗೂ ಗೃಹ ನಿರ್ಮಾಣ ಯಾವ ಹಂತದಲ್ಲಿದೆ;

(ಆ) ಇದಕ್ಕಾಗಿ ೨೦೧೩-೨೦೧೪ರಲ್ಲಿ ಬಿಡುಗಡೆ ಮಾಡಿರುವ ಹಣವೆಷ್ಟು ?

## ಉತ್ಪಾದನೆಯಾಗುವ ಹಾಲಿನ ತಿಂಗಳ ಪ್ರಮಾಣ

**ಶ್ರೀ ಅಶ್ವಥ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು):-**

**೯೩ (೧೪೬) ಮಾನ್ಯ ಕಾನೂನು ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-**

(ಅ) ಬೆಂಗಳೂರು, ಬೆಂಗಳೂರು ಗ್ರಾಮಾಂತರ, ತುಮಕೂರು, ಕೋಲಾರ, ಮಂಡ್ಯ, ಮೈಸೂರು, ಹಾಸನ, ಬೆಳಗಾವಿ ಹಾಗೂ ಗುಲ್ಬರ್ಗಾ ಜಿಲ್ಲೆಗಳಲ್ಲಿ ಉತ್ಪಾದನೆಯಾಗುವ ಹಾಲಿನ ತಿಂಗಳ ಸರಾಸರಿ ಪ್ರಮಾಣ ಎಷ್ಟು ;

(ಆ) ಜಾನುವಾರುಗಳ ವಿಶೇಷ ಚಿಕಿತ್ಸೆಗಾಗಿ, ಯಾವ ಯಾವ ಜಿಲ್ಲೆಗಳಲ್ಲಿ ಪಶು ವೈದ್ಯಕೀಯ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗೆ ಮಂಜೂರಾತಿ ನೀಡಲಾಗಿದೆ ; ನೀಡಿದ್ದರೆ, ನಿಗದಿ ಮಾಡಿರುವ ನಿವೇಶನ ಸ್ಥಳಗಳು ಎಲ್ಲಿವೆ ; ಅದಕ್ಕಾಗಿ ಎಷ್ಟು ಹಣ ಬಿಡುಗಡೆ ಮಾಡಲಾಗಿದೆ ; ಯಾವಾಗ ಕಾಮಗಾರಿ ಪ್ರಾರಂಭವಾಗುತ್ತದೆ ; ಮತ್ತು ಪ್ರಾರಂಭವಾದ ಕಾಮಗಾರಿ ಯಾವಾಗ ಪೂರ್ಣಗೊಳ್ಳುತ್ತದೆ ?

## ಹಾಲಿನ ಕಲಬೆರಕೆ

**ಶ್ರೀ ಅಶ್ವಥ್ ನಾರಾಯಣ (ವಿಧಾನ ಸಭೆಯಿಂದ ಚುನಾಯಿತರಾದವರು)**

**೯೪ (೧೩೮) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–**

(ಅ) ರಾಜ್ಯದಲ್ಲಿ ಪ್ರತಿನಿತ್ಯ ಬಳಕೆ ಮಾಡುವ ಹಾಲು ಕಲಬೆರಕೆಯಾಗುತ್ತಿದೆಯೇ; ಇದು ಎಷ್ಟು ಪ್ರಮಾಣದಲ್ಲಿದೆ;

(ಆ) ಹಾಲು ಕಲಬೆರಕೆಯಾಗಿದೆ ಎಂದು ಯಾವ ಮಾದರಿಯಲ್ಲಿ ಪರೀಕ್ಷಿಸಲಾಗುವುದು;

(ಇ) ಹಾಲಿನಲ್ಲಿ ಕಲಬೆರಕೆ ಮಾಡುತ್ತಿರುವವರು ಯಾರು; ಎಷ್ಟು ದೂರುಗಳು ದಾಖಲಾಗಿವೆ; ಇವರ ವಿರುದ್ಧ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು;

(ಈ) ಇಂತಹ ಕಲಬೆರಕೆ ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಉ) ಕಲಬೆರಕೆ ಮಾಡುವವರಿಗೆ ಜೀವಾವಧಿ ಶಿಕ್ಷೆ ವಿಧಿಸಬೇಕು. ಅದಕ್ಕಾಗಿ ಕಾನೂನಿಗೆ ಅಗತ್ಯ ತಿದ್ದುಪಡಿ ಮಾಡಬೇಕು ಎಂದು ಸುಪ್ರೀಂ ಕೋರ್ಟ್ ತೀವ್ರ ಕಳವಳ ವ್ಯಕ್ತಪಡಿಸಿತ್ತು, ಅಂತೆಯೇ, ಕಾನೂನು ತಿದ್ದುಪಡಿಗೆ ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಹದಿಹರೆಯದ ಬಾಲಕಿಯರು ಮತ್ತು ಯುವತಿಯರ ನಾಪತ್ತೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೫ (೧೩೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೨-೧೩ನೇ ಸಾಲಿನಲ್ಲಿ ರಾಜ್ಯದಲ್ಲಿ ಕಾಣೆಯಾದ ವ್ಯಕ್ತಿಗಳ ಸಂಖ್ಯೆ ಎಷ್ಟು ;

(ಆ) ೨೦೧೩-೧೪ನೇ ಸಾಲಿನಲ್ಲಿ ರಾಜ್ಯಾದ್ಯಂತ ಕಾಣೆಯಾದವರ ಸಂಖ್ಯೆ ಎಷ್ಟು ; ಅಪ್ರಾಪ್ತ ಬಾಲಕಿಯರ ಸಂಖ್ಯೆ ಎಷ್ಟು; ಯುವತಿಯರ ಸಂಖ್ಯೆ ಎಷ್ಟು; ಮಕ್ಕಳ ಸಂಖ್ಯೆ ಎಷ್ಟು ; ವೃದ್ಧರ ಸಂಖ್ಯೆ ಎಷ್ಟು ; ಪುರುಷರ ಸಂಖ್ಯೆ ಎಷ್ಟು; ಮಹಿಳೆಯರ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಇ) ೨೦೧೩-೧೪ನೇ ಸಾಲಿನಲ್ಲಿ ಕಾಣೆಯಾದವರ ಬಗ್ಗೆ ದಾಖಲಾದ ದೂರುಗಳಲ್ಲಿ ಎಷ್ಟು ಪ್ರಕರಣಗಳನ್ನು ಅಥವಾ ಎಷ್ಟು ಮಂದಿಯನ್ನು ಪತ್ತೆ ಮಾಡಲಾಗಿದೆ ;

(ಈ) ಪತ್ತೆ ಮಾಡಲಾಗದ ಪ್ರಕರಣಗಳ ವೈಫಲ್ಯಕ್ಕೆ ಕಾರಣವೇನು; ಹಾಗೂ ಇದನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಮರಳು ಸಂಗ್ರಹ ಮತ್ತು ಅಕ್ರಮ ಮರಳು ಸಾಗಾಣಿಕೆ

**ಶ್ರೀ ಟಿ. ಜಾನ್ (ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು) :-**

೯೬ (೧೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮರಳು ಗುತ್ತಿಗೆದಾರರ ಪರವಾನಗಿ ಪಡೆಯಲು ಅನುಸರಿಸಬೇಕಾದ ನೀತಿಗಳೇನು; ಸದರಿ ಗುತ್ತಿಗೆದಾರರು ಅನುಸರಿಸಬೇಕಾದ ಮಾನದಂಡಗಳೇನು ;

(ಆ) ಕೊಡಗು ಜಿಲ್ಲೆಯಲ್ಲಿ ಎಲ್ಲೆಲ್ಲಿ ಮರಳನ್ನು ಸಂಗ್ರಹಿಸಲು ಅವಕಾಶ ನೀಡಲಾಗಿದೆ; ಎಷ್ಟು ಜನ ಮರಳು ಸಂಗ್ರಹಣಾ ಗುತ್ತಿಗೆದಾರರಿಗೆ ಅನುಮತಿ ನೀಡಲಾಗಿದೆ; ಪ್ರತಿದಿನ ಎಷ್ಟು ಮರಳನ್ನು ಸಂಗ್ರಹಿಸಿ ಎತ್ತಲು ಅವಕಾಶ ನೀಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಅಕ್ರಮ ಮರಳು ಸಂಗ್ರಹ ಸಾಗಾಣಿಕೆ ಬಗ್ಗೆ ಜಿಲ್ಲೆಯಲ್ಲಿ ಕಳೆದ ಎರಡು ವರ್ಷಗಳಿಂದ ಇದುವರೆಗೆ ಎಷ್ಟು ಪ್ರಕರಣಗಳು ದಾಖಲಾಗಿವೆ; ಎಷ್ಟು ದಂಡ ವಿಧಿಸಲಾಗಿದೆ; ಎಷ್ಟು ವಾಹನಗಳನ್ನು ವಶಪಡಿಸಿಕೊಳ್ಳಲಾಗಿದೆ (ವಿವರ ನೀಡುವುದು) ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪುನರ್ವಸತಿ ಯೋಜನೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭ (೧೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಪುನರ್ವಸತಿ ಯೋಜನೆಯಡಿಯಲ್ಲಿ ಫಲಾನುಭವಿಗಳಿಗೆ ಬದಲಿ ನಿವೇಶನ ಹಂಚಿಕೆ ಮಾಡುವ ಸಂದರ್ಭದಲ್ಲಿ ೧೦ ವರ್ಷ ಗುತ್ತಿಗೆ ಅವಧಿಯನ್ನು ನಿಗದಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಬದಲಿ ನಿವೇಶನಕ್ಕೆ ಗುತ್ತಿಗೆ ಅವಧಿ ನಿಗದಿಪಡಿಸಿರುವುದರಿಂದ ಫಲಾನುಭವಿಗಳಿಗೆ ತೊಂದರೆ-ಯಾಗಿರುವುದಿಲ್ಲವೇ;

(ಇ) ಪುನರ್ವಸತಿ ಯೋಜನೆಯಲ್ಲಿ ಫಲಾನುಭವಿಗಳು ತಮ್ಮ ನಿವೇಶನವನ್ನು ಪ್ರಾಧಿಕಾರಕ್ಕೆ ಹಸ್ತಾಂತರಿಸುವುದರಿಂದ ಅವರಿಗೆ

ಬದಲಿ ನಿವೇಶನ ಮಂಜೂರಾತಿಯಲ್ಲಿ ಗುತ್ತಿಗೆ ಅವಧಿಯ ವಿನಾಯಿತಿ ನೀಡುವ ಯೋಚನೆ ಸರ್ಕಾರಕ್ಕೆ ಇದೆಯೇ ;

(ಈ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಬದಲಿ ನಿವೇಶನಕ್ಕೆ ನಿಗದಿಪಡಿಸಿರುವ ಶುಲ್ಕವನ್ನು ಫಲಾನುಭವಿಗಳು ಪಾವತಿಸುತ್ತಿರುವುದರಿಂದ ಗುತ್ತಿಗೆ ಅವಧಿ ರದ್ದುಪಡಿಸಿ ನೇರವಾಗಿ ಫಲಾನುಭವಿಗಳ ಹೆಸರಿಗೆ ಕ್ರಯ ಪತ್ರವನ್ನು ನೀಡಲು ಉಂಟಾಗುವ ತೊಂದರೆಗಳೇನು ?

## ಶಿಕ್ಷಣ ಸಂಸ್ಥೆಗಳಿಗೆ ಬಜೆಟ್‌ನಲ್ಲಿ ಮೀಸಲಿಟ್ಟಿರುವ ಅನುದಾನ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೮ (೧೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೧೩-೧೪ನೇ ಸಾಲಿನಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಗಳು ನಡೆಸುವ ಶಿಕ್ಷಣ ಸಂಸ್ಥೆಗಳಿಗೆ ಮತ್ತು ಧಾರ್ಮಿಕ ಸಂಸ್ಥೆಗಳಿಗೆ ಸರ್ಕಾರವು ಬಜೆಟ್‌ನಲ್ಲಿ ಮೀಸಲಿಟ್ಟಿರುವ ರೂ.೫೦ ಕೋಟಿ ಅನುದಾನವನ್ನು ಯಾವ ಯಾವ ಸಂಘ-ಸಂಸ್ಥೆಗಳಿಗೆ ನೀಡಲಾಗಿದೆ ಮತ್ತು ಎಷ್ಟೆಷ್ಟು ಅನುದಾನ ನೀಡಲಾಗಿದೆ;

(ಆ) ೨೦೧೪-೧೫ರಲ್ಲಿ ಈ ಉದ್ದೇಶಕ್ಕೆ ಮೀಸಲಿಟ್ಟ ರೂ.೭೫ ಕೋಟಿ ಅನುದಾನದಲ್ಲಿ ಯಾವ ಯಾವ ಸಂಸ್ಥೆಗಳಿಗೆ ಎಷ್ಟೆಷ್ಟು ಅನುದಾನ ನೀಡಲಾಗಿದೆ ?

## ಸರ್ಕಾರಿ ಇಲಾಖೆಗಳಲ್ಲಿ ದಿನಗೂಲಿ ನೌಕರರ ಸೇವೆ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-**

೯೯ (೧೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಇಲಾಖೆಗಳಲ್ಲಿ ಕಳೆದ ೩೦ ವರ್ಷಗಳಿಂದ ದಿನಗೂಲಿ ಆಧಾರದ ಮೇಲೆ ಎಷ್ಟು ನೌಕರರು ಕಾರ್ಯನಿರ್ವಹಿಸುತ್ತಿದ್ದಾರೆ ;

(ಆ) ಯಾವ್ಯಾವ ಇಲಾಖೆಗಳಲ್ಲಿ, ಎಷ್ಟೆಷ್ಟು ನೌಕರರು ಕೆಲಸ ನಿರ್ವಹಿಸುತ್ತಿದ್ದಾರೆ ;

(ಇ) ಈ ಒಟ್ಟು ಸಂಖ್ಯೆಯಲ್ಲಿ ಪರಿಶಿಷ್ಟಜಾತಿ/ಪರಿಶಿಷ್ಟ ಪಂಗಡದವರು ಯಾವ್ಯಾವ ಇಲಾಖೆಯಲ್ಲಿ ಎಷ್ಟೆಷ್ಟು ನೌಕರರು ಕೆಲಸ ನಿರ್ವಹಿಸುತ್ತಿದ್ದಾರೆ ;

(ಈ) ಇದುವರೆಗೆ ಸರ್ಕಾರ ನಿಯಮಾನುಸಾರ ಖಾಯಂ ಮಾಡಿರುವ ದಿನಗೂಲಿ ನೌಕರರ ಸಂಖ್ಯೆ ಎಷ್ಟು ;

(ಉ) ಎಲ್ಲಾ ದಿನಗೂಲಿ ನೌಕರರನ್ನು ಯಾವಾಗ ಖಾಯಂ ಮಾಡಲಾಗುತ್ತದೆ ?

## ಆತ್ಮಹತ್ಯೆ ಪ್ರಕರಣಗಳು

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-**

೧೦೦ (೧೪೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ವರ್ಷಗಳಿಂದ ರಾಜ್ಯದಲ್ಲಿ ಆತ್ಮಹತ್ಯೆ ಮಾಡಿಕೊಂಡವರ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಸದರಿ ಆತ್ಮಹತ್ಯೆಗಳು ಯಾವ ಯಾವ ಕಾರಣಗಳಿಂದ ಉಂಟಾಗಿವೆ (ವಿವರ ನೀಡುವುದು) ;

(ಇ) ಆತ್ಮಹತ್ಯೆಯನ್ನು ತಡೆಗಟ್ಟಲು ಇಲಾಖೆ ಕೈಗೊಂಡಿರುವ ಕ್ರಮಗಳೇನು (ವಿವರ ನೀಡುವುದು) ?

## ಕುಡಿಯುವ ನೀರು ಸರಬರಾಜು

**ಶ್ರೀ ಎಸ್. ನಾಗರಾಜು (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು) :-**

೧೦೧ (೧೪೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಚಾಮರಾಜನಗರಕ್ಕೆ ವಾರಕ್ಕೊಮ್ಮೆ ಕುಡಿಯುವ ನೀರು ಸರಬರಾಜಾಗುತ್ತಿದ್ದು, ಈಗ ಸರಬರಾಜಾಗುತ್ತಿರುವ ನೀರು ಜನತೆಗೆ ಏನೇನೂ ಸಾಲದಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈಗಿನ ಜನಸಂಖ್ಯೆ ನೀರಿನ ಸಂಪರ್ಕಗಳ ಸಂಖ್ಯೆ, ಸರಬರಾಜು ಆಗುತ್ತಿರುವ ನೀರಿನ ಪ್ರಮಾಣ ಇವುಗಳ ವಿವರ ಒದಗಿಸುವುದು ;

(ಆ) ಈ ನಗರಕ್ಕೆ ನೀರು ಸರಬರಾಜು ಮಾಡುವ ಎರಡನೇ ಹಂತದ ಯೋಜನೆ ಯಾವ ಹಂತದಲ್ಲಿದೆ ; ಈ ಯೋಜನೆಗೆ ಯಾವಾಗ ಚಾಲನೆ ನೀಡಲಾಗುವುದು ;

(ಇ) ಚಾಮರಾಜನಗರಕ್ಕೆ ನೀರು ಸರಬರಾಜಾಗುವ ಕಪಿಲಾನದಿ ಮೂಲದಲ್ಲಿ (ಟಿ.ನರಸೀಪುರ) ಮೋಟಾರ್ ಮತ್ತು ಜಾಕ್‌ವೆಲ್‌ನಲ್ಲಿ ಪದೇ ಪದೇ ತೊಂದರೆಗಳು ಉದ್ಭವಿಸುತ್ತಿದ್ದು ನೀರು ಸರಬರಾಜಿಗೆ ಅಡಚಣೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದರ ಪರಿಹಾರಕ್ಕೆ ಕೈಗೊಂಡಿರುವ ಕ್ರಮಗಳೇನು ?

(ಈ) ಇದನ್ನು ಹೊರತುಪಡಿಸಿ ಬೋರ್‌ವೆಲ್ ಹಾಗೂ ಇತರ ಮೂಲಗಳಿಂದ ನಗರಕ್ಕೆ ನೀರು ಸರಬರಾಜು ಮಾಡಲು ಕೈಗೊಂಡಿರುವ ಕ್ರಮಗಳೇನು ?

## ಕಾಲುಬಾಯಿ ರೋಗದಿಂದ ಮೃತಪಟ್ಟ ಜಾನುವಾರುಗಳು

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು) :–**

೧೦೨ (೧೪೫) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಕಾಲುಬಾಯಿ ರೋಗಕ್ಕೆ ಈಡಾಗಿ ಅಸು ನೀಗಿದ ಜಾನುವಾರುಗಳ ಸಂಖ್ಯೆ ಎಷ್ಟು; ಈ ಬಗ್ಗೆ ಜಾನುವಾರುಗಳ ಮಾಲೀಕರಿಗೆ ನೀಡಿರುವ ಪರಿಹಾರದ ಮೊತ್ತ ಎಷ್ಟು (ತಾಲ್ಲೂಕುವಾರು ವಿವರ ಒದಗಿಸುವುದು) ;

(ಆ) ಕಾಲುಬಾಯಿ ರೋಗ ನಿರೋಧ ಚುಚ್ಚು ಮದ್ದುಗಳನ್ನು ಎಷ್ಟು ಜಾನುವಾರುಗಳಿಗೆ ನೀಡಲಾಗಿದೆ ;

(ಇ) ಜಾನುವಾರುಗಳು ಕಾಲುಬಾಯಿ ರೋಗದಿಂದ ಮೃತಪಟ್ಟು ಬಹಳ ದಿನಗಳಾದರೂ ಪರಿಹಾರ ನೀಡಿಕೆಯಲ್ಲಿ ವಿಳಂಬವಾಗಲು ಹಾಗೂ ಹಲವಾರು ಪ್ರಕರಣಗಳಲ್ಲಿ ಪರಿಹಾರ ನೀಡದೇ ಇರಲು ಕಾರಣಗಳೇನು ?

## ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಸ್ಥಾಪನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು) :–**

೧೦೩ (೧೪೪) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಿ. ನರಸೀಪುರದಲ್ಲಿ ನ್ಯಾಯಾಲಯದ ನೂತನ ಕಟ್ಟಡದಲ್ಲಿ ನಿರ್ಮಿತವಾಗುತ್ತಿರುವ ಮೊದಲ ಅಂತಸ್ತಿನಲ್ಲಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವನ್ನು ಸ್ಥಾಪಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಈ ಕಟ್ಟಡದಲ್ಲಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ಸ್ಥಾಪಿಸುವುದು ಸೂಕ್ತವಾಗಿದೆ ಎಂದು ಸನ್ಮಾನ್ಯ ನ್ಯಾಯಾಧೀಶರು ಅಭಿಪ್ರಾಯ ಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ತಿ. ನರಸೀಪುರದಲ್ಲಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯವನ್ನು ಸ್ಥಾಪಿಸಿ, ತಿ. ನರಸೀಪುರ ತಾಲ್ಲೂಕಿನ ಸೆಷನ್ಸ್ ಪ್ರಕರಣಗಳನ್ನು ಈ ನ್ಯಾಯಾಲಯಕ್ಕೆ ವಹಿಸುವುದರ ಮೂಲಕ ಮೈಸೂರು ಜಿಲ್ಲಾ ಸೆಷನ್ಸ್ ನ್ಯಾಯಾಲಯದ ಮೇಲಿರುವ ಒತ್ತಡವನ್ನು ಕಡಿಮೆ ಮಾಡಲು ಹಾಗೂ ಶೀಘ್ರ ನ್ಯಾಯದಾನಕ್ಕೆ ವ್ಯವಸ್ಥೆ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಸಣ್ಣ ಕೈಗಾರಿಕಾ ಘಟಕಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು) :–**

೧೦೪ (೧೫೩) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕಾ ಘಟಕಗಳಿಗೆ ಸರ್ಕಾರ ನೀಡುವ ವಿಶೇಷ ಸೌಲಭ್ಯಗಳು ಯಾವುವು ;

(ಆ) ಸರ್ಕಾರದ ಸಹಾಯಧನ ವ್ಯಾಪ್ತಿಯಲ್ಲಿರುವ ಸಣ್ಣ ಕೈಗಾರಿಕಾ ಘಟಕಗಳು ಯಾವುವು ; ಮತ್ತು ಅವುಗಳಿಗೆ ನೀಡುವ ಶೇಕಡವಾರು ಸಹಾಯಧನವೆಷ್ಟು (ಘಟಕವಾರು ವಿವರ ನೀಡುವುದು) ;

(ಇ) ಸಣ್ಣ ಕೈಗಾರಿಕಾ ಘಟಕಗಳನ್ನು ಸ್ಥಾಪಿಸುವಂತೆ ಉತ್ತೇಜಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ?

## ಪಶು ಆಹಾರ ಉತ್ಪಾದನಾ ಘಟಕಗಳು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು) :–**

೧೦೫ (೧೫೧) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬೇಡಿಕೆ ಇರುವ ಪಶು ಆಹಾರದ ಪ್ರಮಾಣವೆಷ್ಟು; ಮತ್ತು ಬೇಡಿಕೆಗನುಗುಣವಾಗಿ ಪೂರೈಸಲ್ಪಡುವ ಪಶು ಆಹಾರದ ಪ್ರಮಾಣವೆಷ್ಟು (ಜಿಲ್ಲಾವಾರು ವಿವರ ನೀಡುವುದು) ;

(ಆ) ರಾಜ್ಯದಲ್ಲಿರುವ ಪಶು ಆಹಾರ ಉತ್ಪಾದನಾ ಘಟಕಗಳು ಎಷ್ಟು ಮತ್ತು ಯಾವುವು; ಅವುಗಳಲ್ಲಿ ಸರ್ಕಾರಿ ಸ್ವಾಮ್ಯದ ಪಶು ಆಹಾರ ಉತ್ಪಾದನಾ ಘಟಕಗಳಾವುವು; ಖಾಸಗಿ ಪಶು ಆಹಾರ ಉತ್ಪಾದನಾ ಘಟಕಗಳಾವುವು (ಜಿಲ್ಲಾವಾರು, ಘಟಕವಾರು ವಿಳಾಸದೊಂದಿಗೆ ವಿವರ ನೀಡುವುದು) ;

(ಇ) ಉಡುಪಿ ಜಿಲ್ಲೆಯಲ್ಲಿ ಪಶು ಆಹಾರ ಉತ್ಪಾದನಾ ಘಟಕ ಸ್ಥಾಪಿಸಲು ಸ್ಥಳ ಕಾದಿರಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಕಾದಿರಿಸಿದ ಸ್ಥಳದಲ್ಲಿ ಪಶು ಆಹಾರ ಉತ್ಪಾದನಾ ಘಟಕವನ್ನು ಸ್ಥಾಪಿಸಲಾಗುವುದೇ; ಇಲ್ಲವಾದಲ್ಲಿ ಕಾರಣವೇನು ?

## ನ್ಯಾಯಾಲಯದ ಸಂಕೀರ್ಣದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು)** :–

೧೦೬ (೧೫೦) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುಂದಾಪುರದ ನ್ಯಾಯಾಲಯಗಳ ಸಂಕೀರ್ಣದಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವ ಕುರಿತು ಮಾಧ್ಯಮಗಳಲ್ಲಿ ವರದಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು ;

(ಆ) ಕುಂದಾಪುರದ ವಕೀಲರ ಸಂಘಕ್ಕೆ ಪ್ರತ್ಯೇಕ ಕಟ್ಟಡ ಸೌಲಭ್ಯವಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕಟ್ಟಡ ಸೌಲಭ್ಯವನ್ನು ಒದಗಿಸಲಾಗುವುದೇ; ಇಲ್ಲವಾದಲ್ಲಿ ಕಾರಣವೇನು ?

## ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಘನತ್ಯಾಜ್ಯ ನಿರ್ವಹಣೆ

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಯಿಂದ ಚುನಾಯಿತರಾದವರು)** :–

೧೦೭ (೧೫೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಮಹಾನಗರ ಪಾಲಿಕೆಗಳಲ್ಲಿನ ಘನತ್ಯಾಜ್ಯ ನಿರ್ವಹಣೆಗೆ ಸರ್ಕಾರ ತೆಗೆದುಕೊಂಡ ತಾತ್ಕಾಲಿಕ ಕ್ರಮಗಳೇನು ಮತ್ತು ಶಾಶ್ವತ ಕ್ರಮಗಳೇನು ;

(ಆ) ರಾಜ್ಯದ ಮಹಾನಗರ ಪಾಲಿಕೆಗಳಲ್ಲಿನ ಘನತ್ಯಾಜ್ಯಗಳನ್ನು ಗ್ರಾಮಾಂತರ ಪ್ರದೇಶಗಳಲ್ಲಿ ವಿಲೆ ಮಾಡುತ್ತಿರುವುದು ಎಷ್ಟು ಸಮಂಜಸ; ಮತ್ತು ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು ?

## ಅಪ್ರಾಪ್ತ ಬಾಲಕಿಯರು ಮತ್ತು ಯುವತಿಯರ ಮೇಲಿನ ಅತ್ಯಾಚಾರ ಪ್ರಕರಣಗಳು

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ)**

೧೦೮ (೧೫೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಲ್ಲಿ ಅಪ್ರಾಪ್ತ ಬಾಲಕಿಯರ ಮೇಲೆ ಮತ್ತು ಯುವತಿಯರ ಮೇಲೆ ವರದಿಯಾಗಿರುವ ಅತ್ಯಾಚಾರಗಳ ಜಿಲ್ಲಾವಾರು ವಿವರ ನೀಡುವುದು;

(ಆ) ಎಷ್ಟು ನಿರ್ದಿಷ್ಟ ಪ್ರಕರಣಗಳಲ್ಲಿ ಆರೋಪಿಗಳು ಬಂಧಿತರಾಗಿದ್ದಾರೆ, ಪ್ರಕರಣವಾರು ಆರೋಪಿಗಳ ಸಂಖ್ಯೆ ನೀಡುವುದು;

(ಇ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ವಿವಿಧ ನ್ಯಾಯಾಲಯಗಳಲ್ಲಿ ವಿಚಾರಣೆ ಪೂರ್ಣಗೊಂಡು ಶಿಕ್ಷೆಗೆ ಒಳಗಾಗಿರುವ ಅತ್ಯಾಚಾರ ಅಪರಾಧಿಗಳ ಸಂಖ್ಯೆ ಎಷ್ಟು; ಆರೋಪ ಸಾಬೀತಾಗದೇ ಬಿಡುಗಡೆಗೊಂಡಿರುವ ಪ್ರಕರಣಗಳು ಮತ್ತು ಆರೋಪಿಗಳ ಸಂಖ್ಯೆ ಎಷ್ಟು ?

## ಬಾಂಗ್ಲಾ ಮತ್ತು ಪಾಕಿಸ್ತಾನದ ನಾಗರೀಕರ ಅನಧಿಕೃತವಾಸ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ)**

೧೦೯(೧೫೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಬಾಂಗ್ಲಾ ಮತ್ತು ಪಾಕಿಸ್ತಾನದ ನಾಗರೀಕರು ಅನಧಿಕೃತವಾಗಿ ವಾಸಿಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅನ್ಯ ಕಾರಣಗಳಿಗೆ ವಿದ್ಯಾಭ್ಯಾಸ, ವ್ಯಾಪಾರ, ವ್ಯವಹಾರ, ಕ್ರೀಡೆ, ಪ್ರವಾಸಿ ಮತ್ತಿತರ ಕಾರಣಗಳಿಗೆ ರಾಜ್ಯಕ್ಕೆ ಬಂದ ಈ ವಿದೇಶಿಯುವರು ವಾಪಸ್ಸು ಹಿಂದಿರುಗದೇ ರಾಜ್ಯದಲ್ಲೇ ವಾಸಿಸುತ್ತಿರುವವರ ವಿವರ ತಿಳಿಸುವುದು;

(ಇ) ಇಂತಹವರನ್ನು ಗುರುತಿಸಿ ಕಾನೂನು ರೀತ್ಯಾ ಕ್ರಮವಹಿಸಿ ಅವರನ್ನು ಅವರವರ ದೇಶಕ್ಕೆ ವಾಪಸ್ಸು ಕಳುಹಿಸಲು ರಾಜ್ಯ ಸರ್ಕಾರ ವಹಿಸಿರುವ ಕ್ರಮಗಳೇನು; ಇದಕ್ಕಾಗಿ ಕೇಂದ್ರ ಸರ್ಕಾರ ಹಾಗೂ ವಿವಿಧ ಸಂಸ್ಥೆಗಳು ಹಾಗೂ ವಿದೇಶಾಂಗ ಇಲಾಖೆಯ ಕಾನೂನು ಸಲಹೆ ಪಡೆಯಲಾಗಿದೆಯೇ?

## ಗೋವುಗಳ ಅಕ್ರಮ ಸಾಗಾಟ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ)**

೧೧೦(೧೫೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯಾದ್ಯಂತ ಕಳೆದ ೧ ವರ್ಷದಲ್ಲಿ ಗೋವುಗಳ ಅಕ್ರಮ ಸಾಗಾಟದ ಎಷ್ಟು ಪ್ರಕರಣಗಳು ಪೊಲೀಸ್ ಠಾಣೆಗಳಲ್ಲಿ ದಾಖಲಾಗಿವೆ; (ಜಿಲ್ಲಾವಾರು ವಿವರ ನೀಡುವುದು)

(ಆ) ಚಾಮರಾಜನಗರ ಕೊಡಗು ಮತ್ತು ಮಂಗಳೂರು ಜಿಲ್ಲೆಗಳ ಮೂಲಕ ಅತ್ಯಂತ ಹೆಚ್ಚಿನ ಪ್ರಮಾಣದಲ್ಲಿ ಗೋವುಗಳು ಕೇರಳದ ಕಸಾಯಿ ಕಾರ್ಖಾನೆಗಳಿಗೆ ಸರಬರಾಜು ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದನ್ನು ತಡೆಗಟ್ಟಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ?

## ನಿರಾಶ್ರಿತ ಕುಟುಂಬಗಳಿಗೆ ಮೀಸಲಿಟ್ಟ ಜಾಗ

**ಶ್ರೀಮತಿ ಭಾರತಿ ಶೆಟ್ಟಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೧ (೧೫೮) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನಿರಾಶ್ರಿತ ಕುಟುಂಬಗಳಿಗಾಗಿ ಮೀಸಲಿಟ್ಟಿರುವ ಜಾಗ ಎಷ್ಟು; (ವಲಯವಾರು ಮಾಹಿತಿ ನೀಡುವುದು);

(ಆ) ಈ ಜಾಗದಲ್ಲಿ ಬಿಡಿಎ ಫ್ಲ್ಯಾಟ್‌ಗಳನ್ನು ನಿರ್ಮಿಸುತ್ತಿದೆಯೇ; ಇದಕ್ಕಾಗಿ ಎಷ್ಟು ಎಕರೆ ಜಾಗವನ್ನು ಸರ್ಕಾರ ಯಾವ ಮಾನದಂಡದ ಆಧಾರದ ಮೇಲೆ ನೀಡಿದೆ;

(ಇ) ನಿರಾಶ್ರಿತ ಕುಟುಂಬಗಳಿಗಾಗಿ ಮೀಸಲಿಟ್ಟಿದ್ದ ಜಾಗದಲ್ಲಿ ಫ್ಲ್ಯಾಟ್‌ಗಳನ್ನು ನಿರ್ಮಿಸಿದ ನಂತರ ಆ ಫ್ಲ್ಯಾಟ್‌ಗಳನ್ನು ನಿರಾಶ್ರಿತ ಕುಟುಂಬಗಳಿಗೆ ಮೀಸಲಿಡಲಾಗಿದೆಯೇ; ಇಲ್ಲದೇ ಇದ್ದಲ್ಲಿ ಕಾರಣವೇನು;

(ಈ) ಈ ಪ್ರದೇಶಗಳಲ್ಲಿ ವಾಸಿಸುತ್ತಿದ್ದ ನಿರಾಶ್ರಿತ ಕುಟುಂಬಗಳಿಗೆ ಪುನರ್ವಸತಿ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮವೇನು ?

# ಮುಜರಾಯಿ ಮೂಲ ಸೌಲಭ್ಯಗಳು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)**

೧೧೨(೧೬೦) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ೨೦೧೩-೧೪ನೇ ಮತ್ತು ೨೦೧೪-೧೫ನೇ ಸಾಲಿನಲ್ಲಿ ಬಿಜಾಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಮುಜರಾಯಿ ಇಲಾಖೆಯಿಂದ ಯಾವ ಯಾವ ಕಾರ್ಯಕ್ಕೆ ಎಷ್ಟು ಹಣ ಮಂಜೂರು ಮಾಡಲಾಗಿದೆ; ಎಷ್ಟು ಹಣ ಬಿಡುಗಡೆ ಮಾಡಲಾಗಿದೆ; (ತಾಲ್ಲೂಕುವಾರು ಪ್ರತಿಯೊಂದು ಕೆಲಸದವಾರು ವಿವರ ನೀಡುವುದು)

(ಆ) ಪ್ರತಿ ವರ್ಷ ಉತ್ತರ ಕರ್ನಾಟಕದ ಜಿಲ್ಲೆಗಳಿಂದ ಆಂಧ್ರದ ಶ್ರೀ ಶೈಲ ಮಲ್ಲಿಕಾರ್ಜುನ ದರ್ಶನಕ್ಕೆ ಲಕ್ಷಾಂತರ ಭಕ್ತರು ಪಾದಯಾತ್ರೆಯ ಮೂಲಕ ತೆರಳುವರು. ಮಾರ್ಗ ಮಧ್ಯದಲ್ಲಿ ಕುಡಿಯುವ ನೀರು, ತಂಗುದಾಣ ಇತ್ಯಾದಿ ವ್ಯವಸ್ಥೆ ಒದಗಿಸುವ ಅಗತ್ಯವಿದ್ದು, ಕರ್ನಾಟಕ-ಆಂಧ್ರ ಸರ್ಕಾರಗಳು ಜಂಟಿ ಕಾರ್ಯ ಕೈಗೊಳ್ಳಲು ಕ್ರಮವಹಿಸಲಾಗುವುದೇ;

(ಇ) ಬಿಜಾಪುರ ಜಿಲ್ಲೆಯಿಂದ ಗುಡ್ಡಾಪುರ ದಾನಮ್ಮ ದರ್ಶನಕ್ಕೆ ಪ್ರತಿ ವರ್ಷ ಪಾದಯಾತ್ರೆ ಮೂಲಕ ತೆರಳುವ ಲಕ್ಷಾಂತರ ಜನರಿಗೆ ಪಾದಯಾತ್ರೆ ಮಾರ್ಗದಲ್ಲಿ ಕುಡಿಯುವ ನೀರಿನ ಹಾಗೂ ತಂಗುದಾಣದ ವ್ಯವಸ್ಥೆಗೆ ಕ್ರಮಕೈಗೊಳ್ಳಲಾಗುವುದೆ?

## ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಪ್ರಥಮ ದರ್ಜೆ ಸಹಾಯಕರು/ಕಂದಾಯ ನಿರೀಕ್ಷಕರು.

**ಶ್ರೀ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ)**

೧೧೩(೧೯೦) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಥಮ ದರ್ಜೆ ಸಹಾಯಕರು/ಕಂದಾಯ ನಿರೀಕ್ಷಕರುಗಳ ಸಂಖ್ಯೆ ಎಷ್ಟು; ಇವರುಗಳಲ್ಲಿ ಎಷ್ಟು ಜನ ಯಾವ ಯಾವ ಇಲಾಖೆಗಳಿಂದ ಎರವಲು ಸೇವೆ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ;

(ಆ) ಇವರುಗಳನ್ನು ನಿಯಮಾವಳಿಗಳಂತೆ ಎಷ್ಟು ವರ್ಷಗಳವರೆಗೆ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸಿ, ಎಷ್ಟು ವರ್ಷಗಳ ನಂತರ ಒಂದು ಸ್ಥಳದಿಂದ ಮತ್ತೊಂದು ಸ್ಥಳಕ್ಕೆ ವರ್ಗಾವಣೆ ಮಾಡಬಹುದಾಗಿದೆ; (ವಿವರ ನೀಡುವುದು) ; ನಿಯಮಾವಳಿಗಳನ್ನು ಮೀರಿ ಎಷ್ಟು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಥಮ ದರ್ಜೆ ಸಹಾಯಕರು/ಕಂದಾಯ ನಿರೀಕ್ಷಕರು ಯಾರ್‍ಯಾರು; ಇದಕ್ಕೆ ಕಾರಣವೇನು (ಹೆಸರುವಾರು ಮತ್ತು ವರ್ಷವಾರು ವಿವರ ನೀಡುವುದು);

(ಇ) ಪ್ರಥಮ ದರ್ಜೆ ಸಹಾಯಕರು/ಕಂದಾಯ ನಿರೀಕ್ಷಕರುಗಳ ವಿರುದ್ಧ ಖಾತೆ ಮಾಡುವ ಹಾಗೂ ನಿವೇಶನ ವರ್ಗಾವಣೆಗೆ ಸಂಬಂಧಿಸಿದಂತೆ ಎಷ್ಟು ಸಾರ್ವಜನಿಕ ದೂರುಗಳು ದಾಖಲಾಗಿವೆ; ಈ ದೂರುಗಳನ್ವಯ ಕಂದಾಯ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದು ಶಿಫಾರಸ್ಸು ಮಾಡಿದ್ದಾರೆಯೇ;

ಹೌದಾದಲ್ಲಿ. ಕಂದಾಯ ಅಧಿಕಾರಿಗಳ ಶಿಫಾರಸ್ಸಿನಂತೆ ಕ್ರಮ ಕೈಗೊಳ್ಳಲಾಗಿದೆಯೇ; ಇದ್ದಲ್ಲಿ ಯಾವ ಕ್ರಮ ಕೈಗೊಳ್ಳಲಾಗಿದೆ; ಇಲ್ಲದಿದ್ದಲ್ಲಿ, ಏಕೆ ಕ್ರಮ ಕೈಗೊಂಡಿಲ್ಲ: (ಹೆಸರುವಾರು ಮತ್ತು ದೂರುವಾರು ವಿವರ ಸಲ್ಲಿಸುವುದು);

(ಈ) ಸಾರ್ವಜನಿಕ ದೂರುಗಳಿದ್ದು ವರ್ಗಾವಣೆ ಆದೇಶವಾಗಿದ್ದರೂ ಸಹ ಕೆಲವರನ್ನು ಕಂದಾಯ ನಿರೀಕ್ಷಕರಾಗಿ ಅದೇ ಸ್ಥಳದಲ್ಲಿ ಮುಂದುವರೆಸಿರುವುದು ನಿಜವೇ; ಕ್ರಮ ಕೈಗೊಳ್ಳಬೇಕೆಂದು ಶಿಫಾರಸ್ಸು ಮಾಡಿದ್ದರೂ ಸದರಿ ಸ್ಥಳದಲ್ಲಿಯೇ ಮುಂದುವರೆಸಿರುವ ಪ್ರಥಮ ದರ್ಜೆ ಸಹಾಯಕರು/ಕಂದಾಯ ನಿರೀಕ್ಷಕರು ಯಾರ್‍ಯಾರು; ಎರಡು-ಮೂರು ಬಾರಿ ವರ್ಗಾವಣೆ ಮಾಡಿ ಬಿಡುಗಡೆಗೊಳಿಸಿದ್ದರೂ ಸಹ ಪುನಃ ಅದೇ ಸ್ಥಳಕ್ಕೆ ವರ್ಗಾವಣೆ ಪಡೆದು ಬಂದಿರುವವರ ವಿವರ ನೀಡುವುದು; ಇದುವರೆಗೂ ಇವರ ವಿರುದ್ಧ ಏಕೆ ಕ್ರಮ ಕೈಗೊಂಡಿಲ್ಲ; ಇನ್ನಾದರೂ ಕ್ರಮ ಕೈಗೊಳ್ಳಲಾಗುವುದೇ; (ವಿವರ ನೀಡುವುದು);

(ಉ) ಕೆಸಿಎಸ್‌ಆರ್ ನಂತೆ ಕ್ರಮ ಜರುಗಿಸಲು ಅವಕಾಶವಿದ್ದರೂ ಸಹ ಪ್ರಾಧಿಕಾರದ ಮೇಲಧಿಕಾರಿಗಳು ಇಂತಹ ನೌಕರರ ವಿರುದ್ಧ ಕ್ರಮ ಜರುಗಿಸದಿರುವುದು ನಿಜವೇ?

## ಬಿ.ಬಿ.ಎಂ.ಪಿ ಸ್ಥಿರಾಸ್ತಿಯ ಗುತ್ತಿಗೆ/ಬಾಡಿಗೆ

**ಶ್ರೀ ಬಿ.ಜೆ ಪುಟ್ಟಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು)**

೧೧೪ (೧೬೫) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಸೇರಿದ ಖಾಲಿ ನಿವೇಶನ ಮತ್ತು ಕಟ್ಟಡಗಳನ್ನು ಬಾಡಿಗೆಗೆ/ಗುತ್ತಿಗೆಗೆ ನೀಡಿರುವುದು ನಿಜವೇ;

(ಆ) ನಿಜವಾಗಿದ್ದರೆ, ಬಾಡಿಗೆ/ಗುತ್ತಿಗೆಯನ್ನು ಪಡೆದವರ ಪೂರ್ಣ ವಿಳಾಸ, ಬಾಡಿಗೆ/ಗುತ್ತಿಗೆಗೆ ನೀಡಿರುವ ಮೊತ್ತ, ದಿನಾಂಕ ಹಾಗೂ ಬಾಡಿಗೆ/ ಗುತ್ತಿಗೆ ಅವಧಿಯನ್ನು ಹೆಚ್ಚಿಸಿದ ಪೂರ್ಣ ವಿವರಗಳನ್ನು ಒದಗಿಸುವುದು?

## ಕಸ ವಿಲೇವಾರಿಯಲ್ಲಿ ಉದ್ಭವಿಸಿರುವ ಸಮಸ್ಯೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ )**

೧೧೫ (೧೬೮) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ದಿನಕ್ಕೆ ಎಷ್ಟು ಪ್ರಮಾಣದ ಕಸ ಸಂಗ್ರಹಣೆಯಾಗುತ್ತದೆ; (ವಿವರ ನೀಡುವುದು)

(ಆ) ಇದನ್ನು ಎಲ್ಲಿ ವಿಲೇವಾರಿ ಮಾಡಲಾಗುತ್ತಿದೆ; ಕಸ ವಿಲೇವಾರಿ ಕಾರ್ಯದಲ್ಲಿ ಏನಾದರೂ ತೊಡಕು ಉಂಟಾಗಿದೆಯೇ; (ವಿವರ ನೀಡುವುದು)

(ಇ) ಕಸ ವಿಲೇವಾರಿ ಸಮಸ್ಯೆಯನ್ನು ನಿವಾರಿಸಲು ಯಾವ ರೀತಿ ತುರ್ತು ಕ್ರಮ ಕೈಗೊಳ್ಳಲಾಗಿದೆ?

## ದೇವಸ್ಥಾನಗಳಲ್ಲಿ ಸಾಮೂಹಿಕ ವಿವಾಹ ಏರ್ಪಾಟು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು )**

೧೧೬(೧೭೯) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಧಾರ್ಮಿಕ ದತ್ತಿ ಇಲಾಖೆಯ ವ್ಯಾಪ್ತಿಯ ದೇವಸ್ಥಾನಗಳಲ್ಲಿ ಮತ್ತು ಖಾಸಗಿ ದೇವಾಲಯಗಳಲ್ಲಿ ಸಾಮೂಹಿಕ ವಿವಾಹವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ರಾಜ್ಯದ ಯಾವ ಯಾವ ಸರ್ಕಾರಿ/ಖಾಸಗಿ ದೇವಾಲಯಗಳಲ್ಲಿ ಸಾಮೂಹಿಕ ವಿವಾಹ ನಡೆಯುತ್ತಿವೆ;

(ಇ) ದೇವಸ್ಥಾನದ ಮೂಲಕ ಸಾಮೂಹಿಕ ವಿವಾಹ ಏರ್ಪಾಡು ಮಾಡುವುದರಿಂದ ಬಡವರಿಗೆ ಹೆಚ್ಚು ಸಹಾಯವಾಗುತ್ತದೆ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ?

## ಅದ್ದೂರಿ ಮದುವೆಗೆ ತೆರಿಗೆ ವಿಧಿಸುವುದು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು )**

೧೧೭(೧೮೧) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೇ:-

(ಅ) ಅದ್ದೂರಿ ಖರ್ಚು ವೆಚ್ಚದ ಹೆಸರಿನಲ್ಲಿ ೧೦೦೦ ಜನ ಸೇರಿಸಿ ನಡೆಸುವ ವಿವಾಹ ಸಮಾರಂಭಕ್ಕೆ ತೆರಿಗೆ ವಿಧಿಸಲು ಸರ್ಕಾರ ಕ್ರಮ ಕೈಗೊಂಡಿರುವುದು ನಿಜವೇ; ಹಾಗಿದ್ದರೆ, ಇದರ ಸ್ವರೂಪವೇನು;

(ಆ) ಅದ್ದೂರಿ ಮದುವೆಗೆ ತೆರಿಗೆ ವಿಧಿಸುವ ಸರ್ಕಾರದ ಕ್ರಮ ಎಂದಿನಿಂದ ಪ್ರಾರಂಭವಾಗಲಿದೆ? (ಮಾಹಿತಿ ನೀಡುವುದು)

## ಮಹಿಳಾ ಪೊಲೀಸ್ ಠಾಣೆ ಮುಂದುವರಿಕೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು )**

೧೧೮ (೧೮೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕುಂದಾಪುರ ನಗರ ವ್ಯಾಪ್ತಿಯಲ್ಲಿರುವ ಮಹಿಳಾ ಪೊಲೀಸ್ ಠಾಣೆಯನ್ನು ಜಿಲ್ಲಾ ಕೇಂದ್ರಕ್ಕೆ ವರ್ಗಾಯಿಸಲು ಕ್ರಮಕೈಗೊಂಡಿರುವುದು ನಿಜವೇ;

(ಆ) ಠಾಣಾ ವ್ಯಾಪ್ತಿಯಲ್ಲಿ ನಕ್ಸಲ್ ಪ್ರದೇಶವು ಸೇರಿರುವ ಹಿನ್ನೆಲೆಯಲ್ಲಿ ತಾಲ್ಲೂಕು ಕೇಂದ್ರದಲ್ಲಿರುವ ಠಾಣೆಯನ್ನು ವರ್ಗಾಯಿಸದೆ ಜಿಲ್ಲಾ ಕೇಂದ್ರಕ್ಕೆ ಹೊಸ ಠಾಣೆ ಮಂಜೂರು ಮಾಡಬೇಕೆಂದು ಮಹಿಳಾ ಸಂಘಟನೆಗಳು ಸರ್ಕಾರಕ್ಕೆ ಮನವಿ ನೀಡಿದ್ದು ಹಾಗೂ ಸ್ಥಳೀಯ ಪುರಸಭೆಯು ಠಾಣೆಯನ್ನು ಕುಂದಾಪುರದಲ್ಲಿಯೇ ಉಳಿಸಲು ನಿರ್ಣಯ ಮಾಡಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಹಾಗಿದ್ದಲ್ಲಿ ತಾಲ್ಲೂಕು ಕೇಂದ್ರದ ಮಹಿಳಾ ಠಾಣೆಯನ್ನು ಮುಂದುವರಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ಖಾಲಿ ಇರುವ ಪಶುವೈದ್ಯರ ಹುದ್ದೆಗಳು

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು )**

೧೧೯(೧೮೨) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಖಾಲಿ ಇರುವ ಪಶುವೈದ್ಯರ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು, ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು) ;

(ಆ) ಖಾಲಿ ಇರುವ ಪಶುವೈದ್ಯರ ಹುದ್ದೆಗಳ ಕೊರತೆಯನ್ನು ಯಾವಾಗ ತುಂಬಲಾಗುವುದು (ವಿವರ ನೀಡುವುದು) ?

## ಮಹಾನಗರ ಪಾಲಿಕೆಗಳಿಗೆ ಬಿಡುಗಡೆಯಾದ ಅನುದಾನ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು )**

೧೨೦(೧೮೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಎರಡು ವರ್ಷಗಳಲ್ಲಿ ಎಲ್ಲಾ ಮಹಾನಗರ ಪಾಲಿಕೆಗಳಿಗೆ ಸರ್ಕಾರದಿಂದ ಒಟ್ಟು ಬಿಡುಗಡೆ ಮಾಡಲಾದ ಅನುದಾನದ ಮೊತ್ತವೆಷ್ಟು, ಖರ್ಚಾದ ಹಣವೆಷ್ಟು (ವಿವರ ನೀಡುವುದು) ;

(ಆ) ಬಿಡುಗಡೆಯಾದ ಅನುದಾನ ಸಮರ್ಪಕವಾಗಿ ಬಳಕೆಯಾಗದಿರುವುದು ಹಾಗೂ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಎಲ್ಲಾ ಮಹಾನಗರ ಪಾಲಿಕೆಗಳು ಘನತ್ಯಾಜ್ಯ ವಿಲೇವಾರಿಗಾಗಿ ಸಾಲಿಡ್ ವೇಸ್ಟ್ ಮ್ಯಾನೇಜ್‌ಮೆಂಟ್‌ಗೆ ಹಂಚಿಕೆ ಮಾಡಲಾದ ಅನುದಾನವೆಷ್ಟು (ವರ್ಷವಾರು ವಿವರ ನೀಡುವುದು) ;

(ಈ) ಸಾಲಿಡ್ ವೇಸ್ಟ್ ಮ್ಯಾನೇಜ್‌ಮೆಂಟ್ ನಿಗದಿತ ಸಮಯದಲ್ಲಿ ಕಾರ್ಯನಿರ್ವಹಿಸುತ್ತಿದೆಯೇ (ವಿವರ ನೀಡುವುದು) ?

## ಪಶುಸಂಗೋಪನಾ ಇಲಾಖೆಯ ಯೋಜನೆಗಳು

**ಶ್ರೀ ರಘುನಾಥ ರಾವ್ ಮಲ್ಕಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೧ (೧೮೬) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಮೂರು ವರ್ಷಗಳಿಂದ ಇಲ್ಲಿಯವರೆಗೆ ಬೀದರ್ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರದಲ್ಲಿ ಪಶುಸಂಗೋಪನಾ ಇಲಾಖೆಯಿಂದ ಅನುಷ್ಠಾನಗೊಂಡ ಯೋಜನೆಗಳಾವುವು; ಅವುಗಳಿಗೆ ತಗಲಿದ ಹಣದ ವೆಚ್ಚವೆಷ್ಟು (ಎಲ್ಲಾ ಯೋಜನೆಗಳವಾರು ವಿವರಣೆ ನೀಡುವುದು) ;

(ಆ) ಪ್ರಸ್ತುತ ಪ್ರಗತಿಯಲ್ಲಿರುವ ಯೋಜನೆಗಳೆಷ್ಟು; ಅವುಗಳಿಗೆ ಮೀಸಲಿಟ್ಟ ಹಣವೆಷ್ಟು (ಯೋಜನಾವಾರು ವಿವರ ಒದಗಿಸುವುದು) ;

(ಇ) ಪ್ರಸಕ್ತ ಸಾಲಿನಲ್ಲಿ ಹಮ್ಮಿಕೊಳ್ಳಲು ಉದ್ದೇಶಿಸಿರುವ ಯೋಜನೆಗಳ ವಿವರ ಮತ್ತು ಆ ಯೋಜನೆಗಳು ಯಾವುವು (ಸಂಪೂರ್ಣ ವಿವರ ಒದಗಿಸುವುದು) ?

## ಕೈಗಾರಿಕೆಗಳ ಪ್ರಾರಂಭ

**ಶ್ರೀ ರಘುನಾಥ ರಾವ್ ಮಲ್ಕಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೨ (೧೮೭) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಯ ಕೋಳಾರ ಕೈಗಾರಿಕಾ ಪ್ರದೇಶದಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯವರು ರೈತರಿಂದ ಸ್ವಾಧೀನಪಡಿಸಿಕೊಂಡಿರುವ

ಜಮೀನನ್ನು ಎಷ್ಟು ಕೈಗಾರಿಕೆಗಳಿಗೆ ಯಾವ ದಿನಾಂಕದಂದು ಹಂಚಿಕೆ ಮಾಡಲಾಗಿದೆ (ವಿವರ ನೀಡುವುದು) ;

(ಆ) ಹಾಗಿದ್ದಲ್ಲಿ, ಹಂಚಿಕೆ ಮಾಡಿರುವ ಜಮೀನುಗಳಲ್ಲಿ ಎಷ್ಟು ಕೈಗಾರಿಕೆಗಳು ಪ್ರಾರಂಭವಾಗಿವೆ; ಎಷ್ಟು ಕೈಗಾರಿಕೆಗಳು ಖಾಲಿ ಜಾಗ ಉಳಿಸಿಕೊಂಡಿವೆ (ವಿವರ ನೀಡುವುದು) ;

(ಇ) ಈ ಜಮೀನಿನಲ್ಲಿ ತ್ವರಿತವಾಗಿ ಕೈಗಾರಿಕೆಗಳನ್ನು ಪ್ರಾರಂಭಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ; ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾವುದು ;

(ಈ) ಈ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶವನ್ನು ಕಲ್ಪಿಸಲಾಗಿದೆಯೇ (ವಿವರ ನೀಡುವುದು) ?

## ಪೊಲೀಸ್ ಠಾಣೆಗಳು

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೩ (೧೮೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಒಟ್ಟು ಪೊಲೀಸ್ ಠಾಣೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ವಿವರ ನೀಡುವುದು) ;

(ಆ) ಪೊಲೀಸ್ ಇಲಾಖೆಯ ಅಧೀನದಲ್ಲಿರುವ ಉಪ ಇಲಾಖೆಗಳು ಯಾವುವು ; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿ ಸಂಖ್ಯೆ ಎಷ್ಟು ;

(ಇ) ಪ್ರತಿ ಠಾಣೆಯಲ್ಲಿ ಎಷ್ಟು ಪ್ರಮಾಣದ ಸಿಬ್ಬಂದಿ ಕಾರ್ಯನಿರ್ವಹಿಸುತ್ತಿದ್ದಾರೆ (ವಿವರ ನೀಡುವುದು) ;

(ಈ) ಬೀದರ್ ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಹಾಗಿದ್ದಲ್ಲಿ, ಗಡಿ ಪ್ರದೇಶದಲ್ಲಿ ಹೊಸದಾಗಿ ಪೊಲೀಸ್ ಠಾಣೆ ಪ್ರಾರಂಭಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ (ವಿವರ ನೀಡುವುದು) ?

## ವಾಣಿಜ್ಯ ಇಲಾಖೆಯಲ್ಲಿ ಸಂಗ್ರಹವಾದ ಹಣ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೨೪ (೧೮೩) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿ ವಾಣಿಜ್ಯ ತೆರಿಗೆ ಇಲಾಖೆಯಿಂದ ವಿವಿಧ ರೂಪದಲ್ಲಿ ಸಂಗ್ರಹವಾದ ತೆರಿಗೆ ಹಣವೆಷ್ಟು (ವರ್ಷವಾರು, ಜಿಲ್ಲಾವಾರು ಮಾಹಿತಿ ನೀಡುವುದು) ;

(ಆ) ಹಾಗಿದ್ದಲ್ಲಿ, ತೆರಿಗೆ ರೂಪದಲ್ಲಿ ವರ್ಷಕ್ಕೆ ಎಷ್ಟು ಮೊತ್ತದ ಹಣವನ್ನು ಕ್ರೋಢೀಕರಿಸುವ ಗುರಿ ಹೊಂದಲಾಗಿತ್ತು, ಕ್ರೋಢೀಕರಿಸಿದ ಹಣವೆಷ್ಟು (ಕಳೆದ ಎರಡು ವರ್ಷಗಳ ಮಾಹಿತಿ ನೀಡುವುದು) ;

(ಇ) ರಾಜ್ಯದಲ್ಲಿ ಎಷ್ಟು ಸಂಸ್ಥೆಗಳು ಹಾಗೂ ವ್ಯಕ್ತಿಗಳು ವಾಣಿಜ್ಯ ತೆರಿಗೆ ಕಟ್ಟದೆ ವಂಚಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ (ಸಂಸ್ಥೆ/ವ್ಯಕ್ತಿಗಳ ಹೆಸರುಗಳನ್ನು ನೀಡುವುದು) ;

(ಈ) ಇವರ ವಿರುದ್ಧ ತೆಗೆದುಕೊಂಡ ಕ್ರಮಗಳೇನು (ಜಿಲ್ಲಾವಾರು ವಿವರ ನೀಡುವುದು) ?

## ನಗರೋತ್ಥಾನ ಯೋಜನೆ

**ಶ್ರೀ ಅಲ್ಲಮ ಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೧೨೫ (೧೮೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗುಲ್ಬರ್ಗಾ ಮತ್ತು ಯಾದಗಿರಿ ಜಿಲ್ಲೆಗಳಲ್ಲಿ ನಗರೋತ್ಥಾನ ಯೋಜನೆಯಡಿ ರಸ್ತೆಗಳು, ಚರಂಡಿ ಹಾಗೂ ಇನ್ನಿತರೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರ ಬಿಡುಗಡೆ ಮಾಡಿದ ಅನುದಾನ ಎಷ್ಟು ;

(ಆ) ಈ ಯೋಜನೆಯಡಿ ಕೈಗೊಳ್ಳಲಿರುವ ಕಾಮಗಾರಿಗಳು ಯಾವುವು; ಹಾಗೂ ಯಾವ ಪ್ರದೇಶಗಳಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ?

## ಮುಜರಾಯಿ ಇಲಾಖೆಗೆ ಒಳಪಡುವ ದೇವಸ್ಥಾನಗಳ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೧೨೬ (೧೯೧) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕದ ಪ್ರಸಿದ್ಧ ಯಾತ್ರಾ ಸ್ಥಳವಾದ ಶ್ರೀ ಯಲ್ಲಮ್ಮ ದೇವಿ ಗುಡ್ಡದಲ್ಲಿ ಮೂಲಭೂತ ಸೌಲಭ್ಯಗಳಾದ ಶೌಚಾಲಯಗಳ ನಿರ್ಮಾಣ, ಯಾತ್ರಿ ನಿವಾಸ, ಕುಡಿಯುವ ನೀರು ಮುಂತಾದ ಮೂಲಭೂತ ಸೌಲಭ್ಯಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಸರ್ಕಾರ ಕೈಗೊಂಡ

ಕ್ರಮಗಳು ಯಾವುವು; ಈ ಯಾತ್ರಾ ಸ್ಥಳದಲ್ಲಿ ನೈರ್ಮಲ್ಯ ಕಾಪಾಡಲು ಸಾರ್ವಜನಿಕರಿಗೆ ನಿರ್ಮಿಸಿದ ಶೌಚಾಲಯಗಳು ಎಷ್ಟು; ಪ್ರವಾಸಿಗರಿಗೆ ಕುಡಿಯುವ ನೀರಿನ ಸೌಲಭ್ಯಕ್ಕಾಗಿ ಕೈಗೊಂಡ ಕ್ರಮಗಳು ಏನು ;

(ಆ) ರಾಜ್ಯದಲ್ಲಿ ಮುಜರಾಯಿ ಇಲಾಖೆಗೆ ಒಳಪಟ್ಟಿರುವ ಒಟ್ಟು ದೇವಸ್ಥಾನಗಳ ಸಂಖ್ಯೆ ಎಷ್ಟು; ಅಂತಹ ದೇವಸ್ಥಾನಗಳಿಂದ ರಾಜ್ಯದ ಬೊಕ್ಕಸಕ್ಕೆ ಬರುವ ಆದಾಯ ಎಷ್ಟು; ಇಲ್ಲಿಯುವರೆಗೆ ದೇವಸ್ಥಾನಗಳಿಗೆ ಕಳೆದ ಸಾಲಿನಲ್ಲಿ ನೋಂದಾಯಿತ ಹಾಗೂ ನೋಂದಾಯಿತವಲ್ಲದ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಸರ್ಕಾರ ಎಷ್ಟು ಅನುದಾನ ಬಿಡುಗಡೆ ಮಾಡಿದೆ; (ಜಿಲ್ಲಾವಾರು ವಿವರ ನೀಡುವುದು) ದೇವಸ್ಥಾನಗಳಿಗೆ ಅನುದಾನ ಬಿಡುಗಡೆ ಮಾಡಲು ಇರುವ ಮಾನದಂಡಗಳು ಏನು ?

## ಮುಜರಾಯಿ ಕಾಮಗಾರಿಗಳಿಗೆ ಮಂಜೂರಾದ ಅನುದಾನ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೧೨೭ (೧೭೩) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಪ್ಪಳ ಜಿಲ್ಲೆಗೆ ೨೦೧೨-೧೩ನೇ ಸಾಲಿನಿಂದ ಇಲ್ಲಿಯವರೆಗೆ ಮುಜರಾಯಿ ಇಲಾಖಾ ಕಾರ್ಯಗಳಿಗೆ ಬಿಡುಗಡೆ ಮಾಡಲಾದ ಅನುದಾನದ ಮೊತ್ತವೆಷ್ಟು ;

(ಆ) ಬಿಡುಗಡೆ ಮಾಡಿದ್ದಲ್ಲಿ, ಯಾವ ಯಾವ ತಾಲ್ಲೂಕುಗಳಿಗೆ ಎಷ್ಟು ಅನುದಾನ ಹಂಚಿಕೆ ಮಾಡಲಾಗಿದೆ (ವಿವರ ನೀಡುವುದು) ;

(ಇ) ಹಂಚಿಕೆಯಾದ ಅನುದಾನದಲ್ಲಿ ಈಗಾಗಲೇ ಕೈಗೊಂಡ ಕಾಮಗಾರಿಗಳಾವುವು ; ಕೈಗೊಂಡ ಕಾಮಗಾರಿಗಳು ಪೂರ್ಣಗೊಂಡಿವೆಯೇ; ಪೂರ್ಣಗೊಳ್ಳದೆ ಇರಲು ಕಾರಣಗಳೇನು (ತಾಲ್ಲೂಕುವಾರು ಕಾಮಗಾರಿ ಮಾಹಿತಿ ನೀಡುವುದು) ?

**ಸರ್ಕಾರ ಆಚರಿಸುತ್ತಿರುವ ರಾಷ್ಟ್ರೀಯ ದಿನಾಚರಣೆ ಇತ್ಯಾದಿ**

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-**

೧೨೮ (೧೭೨) ಮಾನ್ಯ ಮುಖ್ಯ ಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಎಷ್ಟು ರಾಷ್ಟ್ರೀಯ ಹಬ್ಬ/ದಿನಾಚರಣೆ/ಜಯಂತಿಗಳು/ಪುಣ್ಯತಿಥಿಗಳನ್ನು ಆಚರಿಸಲಾಗುತ್ತಿದೆ ;

(ಆ) ಇವುಗಳಲ್ಲಿ ಎಲ್ಲಾ ಇಲಾಖೆಯವರು ಕಡ್ಡಾಯವಾಗಿ ಆಚರಿಸಬೇಕಾದ ರಾಷ್ಟ್ರೀಯ ಹಬ್ಬ/ದಿನಾಚರಣೆ/ಜಯಂತಿಗಳು/ಪುಣ್ಯತಿಥಿಗಳು ಯಾವುವು ;

(ಇ) ಸರ್ಕಾರದಿಂದ ಸದರಿ ಕಾರ್ಯಕ್ರಮಗಳಿಗೆ ನೀಡಲಾಗುತ್ತಿರುವ ಅನುದಾನದ ಪ್ರಮಾಣವೆಷ್ಟು (ಕಾರ್ಯಕ್ರಮವಾರು ವಿವರಗಳನ್ನು ನೀಡುವುದು) ;

(ಈ) ೨೦೧೨-೧೩ನೇ ಸಾಲಿನಿಂದ ಇಲ್ಲಿಯವರೆಗೂ ಪ್ರತಿ ಜಿಲ್ಲೆಗೆ ನೀಡಲಾದ ಅನುದಾನದ ವಿವರಗಳನ್ನು ನೀಡುವುದು (ತಾಲ್ಲೂಕುವಾರು) ;

(ಉ) ಸದರಿ ಅನುದಾನ ಆಯಾ ಕಾರ್ಯಕ್ರಮಗಳಿಗೆ ಸಾಕಾಗುತ್ತಿದೆಯೇ ; ಇಲ್ಲವಾದಲ್ಲಿ, ಹೆಚ್ಚಿನ ಬೇಡಿಕೆಯು ಪ್ರಸ್ತಾವನೆಗಳು ಸ್ವೀಕೃತವಾಗಿವೆಯೇ ;

(ಊ) ಅನುದಾನ ನೀಡದೇ ಇರುವಂತಹ ರಾಷ್ಟ್ರೀಯ ಹಬ್ಬಗಳು ಯಾವುವು (ವಿವರಗಳನ್ನು ನೀಡುವುದು) ;

(ಋ) ಈ ಕುರಿತು ಸರ್ಕಾರದ ನಿಲುವೇನು ?

## ಅಕ್ರಮ ಕಲ್ಲುಗಣಿಗಾರಿಕೆ

**ಶ್ರೀ ಕೆ.ಮೋನಪ್ಪ ಭಂಡಾರಿ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೨೯ (೨೫೦) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಕ್ರಮವಾಗಿ ತೆಗೆದಿರುವಂತಹ ಕಲ್ಲುಗಣಿಗಾರಿಕೆಯ ಕ್ವಾರಿ-ಗುಂಡಿಗಳಿಂದ ಇತ್ತೀಚೆಗೆ ಅನಾಹುತಕಾರಿ ಘಟನೆಗಳು ಜರುಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ರೀತಿಯ ಕಲ್ಲುಗಣಿಗಾರಿಕೆಯಿಂದ (ಗ್ರಾನೈಟ್ ಕಲ್ಲು, ಜಲ್ಲಿಕಲ್ಲು ಗಣಿಗಾರಿಕೆ ಇತ್ಯಾದಿ) ಕ್ವಾರಿಗಳಾಗಿ ನಿರ್ಮಾಣವಾಗುವ ದೊಡ್ಡ ಆಳವುಳ್ಳ ಗುಂಡಿಗಳ ಸಂಖ್ಯೆ ವಿವರಗಳನ್ನು ನೀಡುವುದು ;

(ಇ) ಈ ರೀತಿಯ ನೀರು ತುಂಬಿದ ಕ್ವಾರಿಗಳಿಗೆ ಈ ಭಾಗಗಳ ಸುತ್ತಮುತ್ತಲಿನ ಜನ-ಜಾನುವಾರು ಆಕಸ್ಮಿಕವಾಗಿ ಬಿದ್ದು ಅಥವಾ ಮಕ್ಕಳು ಆಟವಾಡಲು (ಈಜಲು) ಹೋಗಿ ಸಾವಿಗೀಡಾಗಿರುವ ಪ್ರಕರಣಗಳ ಸಂಖ್ಯೆ ವಿವರಗಳನ್ನು ನೀಡುವುದು ;

(ಈ) ಈ ಕ್ವಾರಿಗಳು ಉಂಟಾಗದಂತೆ ತಡೆಯಲು ಅಥವಾ ಕ್ವಾರಿಗಳ ಸುತ್ತ ಅಗತ್ಯ ಆವರಣ ಬೇಲಿ ನಿರ್ಮಿಸಲು ಕ್ವಾರಿ ಮಾಲೀಕರಿಗೆ ಸೂಚಿಸಲು ಇರುವ ತೊಂದರೆಗಳೇನು ;

(ಉ) ಕ್ವಾರಿ ನಿರ್ಮಾಣದ ನಂತರ ಅದರ ನಿರ್ವಹಣೆ ಮುಚ್ಚುವುದು ರಕ್ಷಣೆ ಇತ್ಯಾದಿ ಹೊಣೆಯನ್ನು ಕಲ್ಲುಗಣಿಗಾರಿಕೆ ಮಾಡುವವರಿಗೆ ವಹಿಸುವುದರಿಂದ ನಡೆಯಬಹುದಾದ ಅಹಿತಕರ ಘಟನೆಗಳನ್ನು ತಡೆಯಬಹುದೆ (ವಿವಿರ ನೀಡುವುದು) ?

## ಅಧಿಕಾರಿಗಳ ಗಣಿ ಅಕ್ರಮದ ತನಿಖೆ ಕಾರ್ಯದಲ್ಲಿ ವಿಳಂಬ

**ಶ್ರೀ ಕೆ. ಮೋನಪ್ಪ ಭಂಡಾರಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೦ (೨೫೧) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗಣಿ ಅಕ್ರಮದ ತನಿಖೆಯು ಯಾವ ಹಂತದಲ್ಲಿದೆ; ಈ ಅಕ್ರಮಗಳು ಸೇರಿದಂತೆ ಹಲವು ಪ್ರಕರಣಗಳಲ್ಲಿ ಭಾಗಿಯಾಗಿರುವ ಅಧಿಕಾರಿ–ನೌಕರರ ಹೆಸರು ಇಲಾಖೆ ವಿವರಗಳನ್ನು ನೀಡುವುದು ;

(ಆ) ಅಕ್ರಮ ಗಣಿಗಾರಿಕೆಯು ಸೇರಿದಂತೆ ಇನ್ನಿತರೆ ಲೋಕಾಯುಕ್ತ ತನಿಖಾ ಪ್ರಕರಣಗಳಿಗೂ ಇದೇ ಸುತ್ತೋಲೆ ಅನ್ವಯವಾಗುವುದೇ ;

(ಇ) ಇದರ ತನಿಖೆಯನ್ನು ಚುರುಕುಗೊಳಿಸಲು ಸರ್ಕಾರ ಯಾವ ಕ್ರಮಕ್ಕೆ ಮುಂದಾಗಿದೆ ;

(ಈ) ಈ ನಿಟ್ಟಿನಲ್ಲಿ ಈಗಾಗಲೇ ಸಂಗ್ರಹವಾಗಿರುವ ದಾಖಲೆ–ಮಾಹಿತಿ–ವಿವರಗಳನ್ನು ಒದಗಿಸುವುದು ;

(ಉ) ಈ ಸಂಬಂಧ ಅಗತ್ಯ ದಾಖಲೆಗಳನ್ನು ಒದಗಿಸಲು ಇಲಾಖೆಗಳಿಗೆ ಮುಖ್ಯಕಾರ್ಯದರ್ಶಿಗಳು ಸೂಚಿಸಿರುವರೆ ?

## ದುಂದುವೆಚ್ಚದ ವಿವಾಹಗಳಿಗೆ ತೆರಿಗೆ ವಿಧಿಸುವ ಕ್ರಮ

**ಶ್ರೀ ಕೆ. ಮೋನಪ್ಪ ಭಂಡಾರಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೧ (೨೪೭) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅತೀ ವೈಭವದಿಂದ ದುಭಾರಿ–ದುಂದುವೆಚ್ಚದಲ್ಲಿ ನಡೆಯುವಂತಹ ಸಮಾಜಕ್ಕೆ ತಪ್ಪು ಸಂದೇಶ ರವಾನಿಸುವಂತಹ ಶ್ರೀಮಂತಿಕೆಯಿಂದ ಜರುಗುವಂತಹ ಅದ್ದೂರಿ ಮದುವೆಗಳಿಗೆ ಕಡಿವಾಣ ಹಾಕಲು ಸರ್ಕಾರ ಮುಂದಾಗಿದೆಯೇ ;

(ಆ) ಈ ನಿಟ್ಟಿನಲ್ಲಿ ಇದಕ್ಕೆ ಅಗತ್ಯವಿರುವ ವಿವಾಹ ಕಾಯ್ದೆಗಳಿಗೆ ಸೂಕ್ತ ತಿದ್ದುಪಡಿ ತರುವ ವಿಚಾರವನ್ನು ಸರ್ಕಾರ ಪರಿಶೀಲಿಸಿದೆಯೇ ;

(ಇ) ಯಾವ ಯಾವ ಕ್ರಮಗಳನ್ನು ತೆಗೆದುಕೊಳ್ಳಲು ಆಲೋಚಿಸಲಾಗಿದೆ ; ಬೆಲೆಬಾಳುವ ಆಹ್ವಾನಪತ್ರಿಕೆ ಮುದ್ರಣ, ಜಾತ್ರೋತ್ಸವದ ರೀತಿಯ ಕಾರ್ಯಕ್ರಮ ಆಯೋಜನೆ, ಜಗಮಗಿಸುವ ಕೈಗೆಟುಕದ ಕಲ್ಯಾಣಮಂಟಪ ಖರ್ಚು, ಬಯಲು ಮೈದಾನಗಳಲ್ಲಿ ದೊಡ್ಡ ದೊಡ್ಡ ಪೆಂಡಾಲ್‌ಗಳಲ್ಲಿ ವಿಜೃಂಭಣೆಯ ತಯಾರಿ, ಅಜೀರ್ಣವಾಗುವಷ್ಟು ಊಟದ ಮೆನು ಹಾಗೂ ಆಹಾರ ಪೋಲು ಸೇರುವ ಆಹ್ವಾನಿತರಿಗೆ ನಿಯಂತ್ರಣ ಇದರಲ್ಲಿ ಒಳಪಡುವುದೇ ;

(ಈ) ಇಂತಹ ಮದುವೆಗಳಿಂದ ಬಡ, ಮಧ್ಯಮ ವರ್ಗದ ಜನತೆಯ ಕಣ್ಣು ಕುಕ್ಕುವುದಲ್ಲದೇ ಇದರಿಂದ ಸಮಾಜಕ್ಕೆ ಕಂಟಕವಲ್ಲದೇ ಆದರ್ಶ ಪಾಲನೆಗಳಿರುವುದಿಲ್ಲದರ ಬಗ್ಗೆ ಸರ್ಕಾರದ ನಿಲುವೇನು ;

(ಉ) ಈ ನಿಟ್ಟಿನಲ್ಲಿ ಸದರಿ ಮದುವೆಗಳಿಗೆ ತೆರಿಗೆ ವಿಧಿಸಿದಲ್ಲಿ ನಿಯಂತ್ರಣಕ್ಕೆ ತರಬಹುದೆಂದು ಸರ್ಕಾರ ಭಾವಿಸುವುದೇ (ವಿವರಿಸುವುದು) ?

## ಮಹಾನಗರ ಪ್ರದೇಶ ವ್ಯಾಪ್ತಿಯಲ್ಲಿ ಸಾಕು ನಾಯಿಗಳಿಂದ ತೊಂದರೆ

**ಶ್ರೀ ಕೆ. ಮೋನಪ್ಪ ಭಂಡಾರಿ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೩೨ (೨೪೮) ಮಾನ್ಯ ಮುಖ್ಯ ಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರದ ಹಲವಾರು ಬಡಾವಣಾ ವ್ಯಾಪ್ತಿಗಳಲ್ಲಿ ಇತ್ತೀಚೆಗೆ ಸಾಕುನಾಯಿಗಳನ್ನು ರಸ್ತೆ ಬದಿಗಳಲ್ಲಿ, ಪಾರ್ಕ್‌ಗಳಲ್ಲಿ ಸುತ್ತಾಡಿಸಿ ಮಲಮೂತ್ರ ಮಾಡಿಸುವ ಪ್ರವೃತ್ತಿ ಬೆಳೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದಲ್ಲಿ, ಈ ಕ್ರಮ ತಡೆಯಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಸದರಿ ಇಂತಹ ನಾಯಿ ಸಾಕಾಣಿಕೆಗೆ ಪಾಲಿಕೆಯಿಂದ ಅನುಮತಿ ಹಾಗೂ ಪರವಾನಗಿ ಪಡೆಯಲಾಗಿದೆಯೇ; ಇಲ್ಲದಿದ್ದಲ್ಲಿ ಕಾರಣಗಳೇನು ;

(ಇ) ಹಾಗಿದ್ದಲ್ಲಿ, ನಗರ ವ್ಯಾಪ್ತಿಯಲ್ಲಿರುವ ಇಂತಹ ಸಾಕುನಾಯಿ ಪ್ರಾಣಿಗಳ ಸಂಖ್ಯಾ ವಿವರಗಳನ್ನು ವಾರ್ಡ್‌ವಾರು ನೀಡುವುದು ;

(ಈ) ಈ ಕೃತ್ಯ ತಡೆಯಲು ಪಾಲಿಕೆ ಯಾವ ಕ್ರಮ ತೆಗೆದುಕೊಂಡಿದೆ; ಅಥವಾ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದೇ ;

(ಉ) ಸದರಿ ನಾಯಿಗಳಿಗೆ ಕಾಲಾನುಕ್ರಮದಂತೆ ಅಗತ್ಯಕ್ಕನುಗುಣವಾಗಿ ಲಸಿಕೆ-ಚಿಕಿತ್ಸೆಗಳನ್ನು ನಾಯಿ ಸಾಕುವವರು ಮಾಡುತ್ತಿರುವರೇ, ಇಲ್ಲದಿದ್ದಲ್ಲಿ, ಇಂತಹವರ ಮೇಲೆ ಯಾವ ಕ್ರಮಕ್ಕೆ ಸರ್ಕಾರ ಮುಂದಾಗುವುದು; ಈ ನಾಯಿಗಳ ಮಲಮೂತ್ರ ಸಾರ್ವಜನಿಕವಾಗಿ ಮಾಡಿಸುವುದರಿಂದ ಜನರ ಆರೋಗ್ಯದ (ಲಾಡಿಹುಳಬಾಧೆ) ಮೇಲೆ ಪರಿಣಾಮ ಉಂಟು ಮಾಡುವುದೇ (ವಿವರ ಒದಗಿಸುವುದು) ?

## ಉಚ್ಚ ನ್ಯಾಯಾಲಯ ಮತ್ತು ಜಿಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳು

**ಶ್ರೀ ಕೆ. ಮೋನಪ್ಪ ಭಂಡಾರಿ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೩೩ (೨೪೯) ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು ಹಾಗೂ ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪಶುಸಂಗೋಪನೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಹೈಕೋರ್ಟ್‌ನಲ್ಲಿ ಹಾಗೂ ಜಿಲ್ಲಾ ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳೆಷ್ಟು ; ಸದರಿ ಪ್ರಕರಣಗಳು

ಯಾವಾಗಿನಿಂದ ಬಾಕಿ ಇವೆ (ಜಿಲ್ಲಾವಾರು ವಿವರಗಳನ್ನು ಒದಗಿಸುವುದು) ;

(ಆ) ಸದರಿ ಪ್ರಕರಣಗಳನ್ನು ಇತ್ಯರ್ಥಪಡಿಸಲು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಮುಂದಾಗುವ ಬಗ್ಗೆ ಚಿಂತಿಸಿದೆಯೇ ;

(ಇ) ಇದಕ್ಕಾಗಿ ಲೋಕಅದಾಲತ್ ಪೀಠಗಳನ್ನು ಸ್ಥಾಪಿಸಲಾಗಿದೆಯೇ; ಇದರಲ್ಲಿ ಎಷ್ಟು ವರ್ಷದ ಅವಧಿಯ ಹಳೆಯದಾದ ಪ್ರಕರಣಗಳನ್ನು ಸಿವಿಲ್, ಕ್ರಿಮಿನಲ್, ಇನ್ನಿತರೆ ಕೇಸುಗಳನ್ನು ವಿಲೇವಾರಿ ಮಾಡಲು ಉದ್ದೇಶಿಸಲಾಗಿದೆ ;

(ಈ) ಲೋಕಅದಾಲತ್‌ನಲ್ಲಿ ಕಳೆದ ಒಂದು ವರ್ಷದ ಅವಧಿಯಲ್ಲಿ ಇತ್ಯರ್ಥಗೊಳಿಸಿದ ಪ್ರಕರಣಗಳೆಷ್ಟು ; ಸಿವಿಲ್, ಕ್ರಿಮಿನಲ್‌ವಾರು, ಜಿಲ್ಲಾವಾರು ಪ್ರಕರಣದ ಸಂಖ್ಯೆ ವಿವರಗಳನ್ನು ಒದಗಿಸುವುದು ;

(ಉ) ಈ ಲೋಕಅದಾಲತ್ ಮೂಲಕ ಪ್ರಕರಣ ಇತ್ಯರ್ಥಪಡಿಸುವ ಪ್ರಕ್ರಿಯೆಗೆ ಸಾರ್ವಜನಿಕರಿಂದ ಯಾವ ಪ್ರತಿಕ್ರಿಯೆ ಬಂದಿದೆ ಇದನ್ನು ಪರ್ಯಾಯ ವ್ಯಾಜ್ಯ ಇತ್ಯರ್ಥದ ವಿಧಾನಗಳಲ್ಲಿ ಅತ್ಯುತ್ತಮ ಎಂದು ಭಾವಿಸಲಾಗಿದೆಯೇ ;

(ಊ) ಸದರಿ ಯೋಜನೆಯ ಅನುಷ್ಠಾನಕ್ಕೆ ನ್ಯಾಯಾಧೀಶರ ಪಾತ್ರ ಹಾಗೂ ಅವರ ಪಾಲ್ಗೊಳ್ಳುವಿಕೆ ಆಸಕ್ತಿ ಬಗ್ಗೆ ಸರ್ಕಾರದ ನಿಲುವೇನು ?

ವಿ. ಶ್ರೀಶ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ-2, ಬೆಂ-59/ಕಾ.ಸೂ. 03347/1000 ಪ್ರತಿಗಳು/26-06-2014